ಪ್ರಜಾವಾಣಿ

Friday, August 26, 2011

# ಕ್ರಿಕೆಟ್: ಕಾಲೇಜ್ ಪ್ರೀಮಿಯರ್ ಲೀಗ್ ಟೂರ್ನಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಜೈನ್ ವಿಶ್ವವಿದ್ಯಾಲಯ ಆಶ್ರಯದಲ್ಲಿ ಸೆಪ್ಟೆಂಬರ್ 18ರಿಂದ 25ರವರೆಗೆ ಉದ್ಯಾನ ನಗರಿಯಲ್ಲಿ ಅಖಿಲ ಭಾರತ ಅಂತರ ಕಾಲೇಜ್ ಪ್ರೀಮಿಯರ್ ಲೀಗ್ (ಸಿಪಿಎಲ್) ಟ್ವೆಂಟಿ-20 ಕ್ರಿಕೆಟ್ ಟೂರ್ನಿ ನಡೆಯಲಿದೆ.

ಈ ಲೀಗ್‌ನಲ್ಲಿ ದೇಶದ ವಿವಿಧ ಭಾಗಗಳಿಂದ ಒಟ್ಟು 24 ಕಾಲೇಜ್ ತಂಡಗಳು ಪಾಲ್ಗೊಳ್ಳಲಿವೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ಸಹಯೋಗದೊಂದಿಗೆ ನಡೆಯುತ್ತಿರುವ ಈ ಟೂರ್ನಿಯ ಸೆಮಿಫೈನಲ್ ಹಾಗೂ ಫೈನಲ್ ಪಂದ್ಯಗಳು ಹೊನಲು ಬೆಳಕಿನಲ್ಲಿ ನಡೆಯಲಿವೆ.